# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 590 |
| ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ್ ಅರಳಿ |
| ಉತ್ತರಿಸುವ ದಿನಾಂಕ | : | 11.07.2023 |
| ಉತ್ತರಿಸುವ ಸಚಿವರು | : | ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೀದರ್ ನಗರಸಭೆಯ ಚುನಾವಣೆ ಜರುಗಿ ಸುಮಾರು 2-3 ವರ್ಷಗಳಾಗಿದ್ದು, ಸರ್ಕಾರ ಆದೇಶ ನೀಡಿದ್ದಾಗ್ಯೂ ಜಿಲ್ಲಾಧಿಕಾರಿಗಳು ಅಧ್ಯಕ್ಷ, ಉಪಾಧ್ಯಕ್ಷರ ಚುನಾವಣೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; | ಬೀದರ್ ನಗರಸಭೆಯ ಚುನಾಯಿತ ಕೌನ್ಸಿಲ್ ಅವಧಿಯು ದಿನಾಂಕ:21.03.2019ರಂದು ಮುಕ್ತಾಯಗೊಂಡಿರುತ್ತದೆ.<br><br>ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 92 ಎಂಎಲ್ಆರ್ 2018, ದಿನಾಂಕ:12.03.2019ರಲ್ಲಿ, ಕರ್ನಾಟಕ ಪೌರಸಭೆಗಳ ಕಾಯ್ದೆ-1964ರ ಸೆಕ್ಷನ್-315ರನ್ವಯ ಆಡಳಿತಾತ್ಮಕ ಹಿತದೃಷ್ಟಿಯಿಂದ ಹೊಸ ಚುನಾಯಿತ ಕೌನ್ಸಿಲ್ ಆಸ್ತಿತ್ವಕ್ಕೆ ಬರುವವರೆಗೂ ನಗರ ಸ್ಥಳೀಯ ಸಂಸ್ಥೆಗಳ ದೈನಂದಿನ ಕಾರ್ಯನಿರ್ವಹಣೆಗಾಗಿ ಆಡಳಿತಾಧಿಕಾರಿಗಳನ್ನು ನೇಮಕ ಮಾಡಿ ಆದೇಶಿಸಲಾಗಿರುತ್ತದೆ.<br><br>ಬೀದರ್ ನಗರಸಭೆಯ ಕೌನ್ಸಿಲ್ ಅವಧಿ ಮುಗಿದಿರುವುದರಿಂದ ಚುನಾವಣೆ ನಡೆಸುವ ಸಲುವಾಗಿ ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 94 ಕೆಎಂಆರ್ 2018; ದಿನಾಂಕ:16.03.2021ರನ್ವಯ ವಾರ್ಡ್‌ವಾರು ಮೀಸಲಾತಿ ನಿಗಧಿಪಡಿಸಿ ಆದೇಶಿಸಲಾಗಿದೆ. ಅದರಂತೆ, ದಿನಾಂಕ:27.04.2021ರಂದು ಕೌನ್ಸಿಲ್ ಚುನಾವಣೆ ನಡೆದಿರುತ್ತದೆ.<br><br>ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 107 ಎಂಎಲ್ಆರ್ 2020(1), ದಿನಾಂಕ:08.10.2020ರನ್ವಯ ರಾಜ್ಯವನ್ನು ಒಂದು ಘಟಕವನ್ನಾಗಿಟ್ಟುಕೊಂಡು ರಾಜ್ಯದ ಎಲ್ಲಾ ನಗರಸಭೆಗಳಿಗೆ 9ನೇ ಅವಧಿಗೆ ಅಧ್ಯಕ್ಷ / ಉಪಾಧ್ಯಕ್ಷ ಸ್ಥಾನಗಳಿಗೆ ಮೀಸಲಾತಿ ನಿಗಧಿಪಡಿಸುವ ಸಂದರ್ಭದಲ್ಲಿ ಬೀದರ್ ನಗರಸಭೆಯ ಅಧ್ಯಕ್ಷ / ಉಪಾಧ್ಯಕ್ಷ ಸ್ಥಾನಕ್ಕೂ ಸಹ ಮೀಸಲಾತಿ ನಿಗಧಿಪಡಿಸಲಾಗಿರುತ್ತದೆ.<br><br>ಪ್ರಸ್ತುತ ಬೀದರ್ ನಗರಸಭೆಗೆ 9ನೇ ಅವಧಿಯ ಅಧ್ಯಕ್ಷ / ಉಪಾಧ್ಯಕ್ಷ ಸ್ಥಾನಗಳಿಗೆ ಚುನಾವಣೆ ನಡೆಸಬೇಕಾಗಿದ್ದು, ಸರ್ಕಾರದ ಪತ್ರ ಸಂಖ್ಯೆ: ನಅಇ 229 ಎಂಎಲ್ಆರ್ 2022, ದಿನಾಂಕ:17.09.2022ರಲ್ಲಿ ದಿನಾಂಕ08.10.2020ರ ಅಧಿಸೂಚನೆಯನ್ವಯ ಬೀದರ್ ನಗರಸಭೆಯ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರ ಸ್ಥಾನಗಳಿಗೆ ನಿಯಮಾನುಸಾರ ಚುನಾವಣೆ ನಡೆಸುವಂತೆ ಜಿಲ್ಲಾಧಿಕಾರಿ, ಬೀದರ್ ಜಿಲ್ಲೆ ರವರಿಗೆ ನಿರ್ದೇಶನ ನೀಡಲಾಗಿರುತ್ತದೆ. |
| (ಆ) | ಸುಮಾರು 3 ವರ್ಷಗಳಿಂದ ನಗರಸಭೆ ಸದಸ್ಯರಿಗೆ ಅಧಿಕಾರವಿಲ್ಲದೆ ಜನರಿಗೆ ತೊಂದರೆ ಹಾಗೂ ಸದಸ್ಯರಿಗೆ ಮುಜುಗರವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯ; ಬಂದಿದ್ದಲ್ಲಿ ಚುನಾವಣೆ ಜರುಗಿಸಲು ಯಾವ ಕಾಲಮಿತಿಯೊಳಗೆ ಕ್ರಮ ಜರುಗಿಸಲಾಗುವುದು. | |
| (ಇ) | ನಗರಸಭೆ ಪೂರ್ಣ ಪ್ರಮಾಣದಲ್ಲಿ ಸ್ಥಾಪಿತವಾಗದಿದ್ದ ಕಾರಣಕ್ಕೆ ನಗರದಲ್ಲಿ ಚರಂಡಿ, ಕುಡಿಯುವ ನೀರು, ಸಾರ್ವಜನಿಕ ಕುಂದು ಕೊರತೆಗಳನ್ನು ಬಗೆಹರಿಸಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯ; ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು? | |

| | | |
|---|---|---|
| | | ಬೀದರ್ ನಗರಸಭೆಗೆ ಜಿಲ್ಲಾಧಿಕಾರಿಗಳು, ಬೀದರ್ ಜಿಲ್ಲೆ, ರವರನ್ನು ಆಡಳಿತಾಧಿಕಾರಿಯನ್ನಾಗಿ ಸರ್ಕಾರದಿಂದ ನೇಮಿಸಲಾಗಿರುವುದರಿಂದ, ನಗರಸಭೆ ಅಧಿಕಾರಿ ಮತ್ತು ಸಿಬ್ಬಂದಿಗಳು ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಆದ್ದರಿಂದ, ಅಭಿವೃದ್ಧಿ ಕಾರ್ಯಗಳು ಕುಂಠಿತಗೊಂಡಿರುವುದಿಲ್ಲ.<br><br>ಬೀದರ್ ನಗರಸಭೆಗೆ 9ನೇ ಅವಧಿಯ ಅಧ್ಯಕ್ಷ / ಉಪಾಧ್ಯಕ್ಷ ಸ್ಥಾನಗಳಿಗೆ ಚುನಾವಣೆ ನಡೆಸುವಂತೆ ದಿನಾಂಕ:17.09.2022ರ ಪತ್ರದಲ್ಲಿ ನಿರ್ದೇಶನ ನೀಡಲಾಗಿರುತ್ತದೆ. ಆದಾಗ್ಯೂ ಚುನಾವಣೆ ನಡೆಸದೇ ಇರುವುದರಿಂದ ದಿನಾಂಕ:07.07.2023ರಂದು ಜಿಲ್ಲಾಧಿಕಾರಿ, ಬೀದರ್ ಇವರಿಗೆ ಪತ್ರ ಬರೆದು ಈ ಬಗ್ಗೆ ತಕ್ಷಣವೇ ಕ್ರಮವಹಿಸಿ ತೆಗೆದುಕೊಂಡ ಕ್ರಮದ ಬಗ್ಗೆ ಸರ್ಕಾರಕ್ಕೆ ಮಾಹಿತಿ ಒದಗಿಸುವಂತೆ ಕೋರಲಾಗಿದೆ. |

**ಸಂಖ್ಯೆ:** ನಅಇ 14 ಎಲ್‌ಸಿಕ್ಯೂ 2023

(ರಹೀಂ ಖಾನ್)
ಪೌರಾಡಳಿತ ಮತ್ತು ಹಜ್ ಸಚಿವರು